ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

6

ಇಲಾಖೆ / ವಿಷಯ : DEPARTMENT / SUBJECT: [illegible]

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ

ದಿನಾಂಕ : DATE 29/9/2020

## ಕಲಾಪದಲ್ಲಿ 36 ವಿಧೇಯಕ ಅಂಗೀಕಾರ
## ಸ್ಪೀಕರ್ ವಿಶ್ವೇಶ್ವರ ಹೆಗಡೆ ಕಾಗೇರಿ ಹೇಳಿಕೆ

# ಕರೋನಾ ನಡುವೆಯೂ ಕಲಾಪ ಯಶಸ್ವಿ

29/9/20

**ವಿಶ್ವವಾಣಿ ಸುದ್ದಿಮನೆ** ಬೆಂಗಳೂರು



ರಾಜ್ಯದಲ್ಲಿ ಕರೋನಾ ಆತಂಕದ ನಡುವೆಯೂ ಈ ಬಾರಿ ಮುಂಗಾರು ಅಧಿವೇಶನ ಉತ್ತಮ ರೀತಿಯಲ್ಲಿ ನಡೆದಿದ್ದು, ಇದಕ್ಕೆ ಸಹಕರಿಸಿದ ಪ್ರತಿಯೊಬ್ಬರಿಗೂ ಧನ್ಯವಾದ ಎಂದು ವಿಧಾನಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕರೋನಾ ಆತಂಕದಲ್ಲಿ ಆರು ದಿನದಲ್ಲಿ 40 ಗಂಟೆ ಕಲಾಪ ನಡೆದಿದೆ. ವಿಧೇಯಕಗಳ ಬಗ್ಗೆ 14 ಗಂಟೆ 22 ನಿಮಿಷ ಚರ್ಚೆಯಾಗಿದೆ. ಸದಸ್ಯರು ಉತ್ಸಾಹದಿಂದ ಚರ್ಚೆಯಲ್ಲಿ ಭಾಗವಹಿಸಿ ಅತ್ಯುತ್ತಮ ಚರ್ಚೆಯಾಗಿರುವುದು ಈ ಬಾರಿ ಅಧಿವೇಶನದ ದಾಖಲೆಯಾಗಿದೆ ಎಂದರು. 37 ವಿಧೇಯಕಗಳ ಪೈಕಿ 36 ವಿಧೇಯಕಗಳನ್ನು ಚರ್ಚಿಸಿ ಅಂಗೀಕರಿಸಲಾಗಿದೆ. ಒಂದು ವಿಧೇಯಕ ಮಾತ್ರ ಚರ್ಚಿಸಿ ತಡೆ ಹಿಡಿಯಲಾಗಿದೆ ಎಂದು ಸ್ಪಷ್ಟಪಡಿಸಿದರು.

ಒಟ್ಟು 3071 ಪ್ರಶ್ನೆಗಳನ್ನು ಸ್ವೀಕರಿಸಲಾಗಿದ್ದು, ಅದರಲ್ಲಿ 1109 ಪ್ರಶ್ನೆಗಳ ಉತ್ತರಗಳನ್ನು ಸದನದಲ್ಲಿ ಮಂಡಿಸಲಾಗಿದೆ. ಈ ಅಧಿವೇಶನದಲ್ಲಿ ಸದಸ್ಯರಿಗೆ ಮತ್ತು ಪತ್ರಿಕಾ ಮಾಧ್ಯಮದವರಿಗೆ ಲಿಖಿತ ಮೂಲಕ ಉತ್ತರಿಸಲಾಗುವ ಪ್ರಶ್ನೆಗಳಿಗೆ ಉತ್ತರಗಳನ್ನು ಇ-ಮೇಲ್ ಮೂಲಕ ಒದಗಿಸಿರುವುದು ಒಂದು ವಿಶೇಷವಾಗಿದೆ ಎಂದರು.

ನಿಯಮ 351ರಡಿಯಲ್ಲಿ 60 ಸೂಚನೆಗಳನ್ನು ಅಂಗೀಕರಿಸಿದ್ದು, ಅದರಲ್ಲಿ 35 ಸೂಚನೆಗಳಿಗೆ ಉತ್ತರಗಳನ್ನು ಸ್ವೀಕರಿಸಲಾಗಿದೆ. ಗಮನ ಸೆಳೆಯುವ 129 ಸೂಚನೆಗಳ ಪೈಕಿ 9 ಸೂಚನೆಗಳನ್ನು ಚರ್ಚಿಸಲಾಗಿದೆ. 72 ಸೂಚನೆಗಳ ಉತ್ತರಗಳನ್ನು ಸ್ವೀಕರಿಸಲಾಗಿದೆ. ವಿವಿಧ ಸ್ಥಾಯಿ ಸಮಿತಿಗಳಿಗೆ ಸದಸ್ಯರನ್ನು ನಾಮನಿರ್ದೇಶನ ಮಾಡಲು ಹಾಗೂ ಕರ್ನಾಟಕ ವಿಧಾನಸಭೆಯ ಕಾರ್ಯವಿಧಾನ ಮತ್ತು ನಡವಳಿಕೆಯ ನಿಯಮಗಳನ್ನು ಪರಿಶೀಲಿಸಿ ತಿದ್ದುಪಡಿ ತರಲು ಶಿಫಾರಸು ಮಾಡುವುದಕ್ಕಾಗಿ ನಿಯಮಾವಳಿ ಸಮಿತಿಯನ್ನು ರಚಿಸಲು ಸಭಾಧ್ಯಕ್ಷರಿಗೆ ಅಧಿಕಾರ ನೀಡಲಾಗಿದೆ ಎಂದು ಹೇಳಿದರು.

ವಿಧಾನಮಂಡಲದ ವತಿಯಿಂದ ಪ್ರಕಟಗೊಳ್ಳುತ್ತಿದ್ದ ತ್ರೈಮಾಸಿಕ ಶಾಸಕಾಂಗ ಪತ್ರಿಕೆಯು ಸ್ಥಗಿತಗೊಂಡಿರುವುದನ್ನು ಗಮನಿಸಿ ಜುಲೈ 2019ರಿಂದ ಪತ್ರಿಕೆಯನ್ನು ಪ್ರಕಟಿಸಿ ಈಗಾಗಲೇ ಮಾರ್ಚ್ 2020 ಅವಧಿಯವರೆಗಿನ ಮೂರು ಸಂಚಿಕೆಗಳನ್ನು ಬಿಡುಗಡೆಗೊಳಿಸಿ ಸದಸ್ಯರಿಗೆ ನೀಡಲಾಗಿದೆ. 15ನೇ ವಿಧಾನಸಭೆಯ ಸದಸ್ಯರ ಪರಿಚಯ ಪುಸ್ತಕವನ್ನು ಪ್ರಕಟಿಸಿ ಸದಸ್ಯರಿಗೆ ಒದಗಿಸಲು ಕ್ರಮಕ್ಕೈಗೊಳ್ಳಲಾಗಿದೆ ಎಂದರು.